ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	:	ಶ್ರೀ ಸುನಿಲ್ ಸುಬ್ರಮಣಿ ಎಂ ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	768
ಉತ್ತರಿಸಬೇಕಾದ ದಿನಾಂಕ	:	15.12.2020.
ಉತ್ತರಿಸಬೇಕಾದವರು	:	ನಗರಾಭಿವೃದ್ಧಿ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಮಡಿಕೇರಿ ನಗರದಲ್ಲಿ ಉತ್ಪತ್ತಿಯಾಗುವ ಒಳಚರಂಡಿ ನೀರನ್ನು ಯಾವ ರೀತಿಯಲ್ಲಿ ಮತ್ತು ಎಲ್ಲಿಗೆ ಹರಿಸಲಾಗುತ್ತಿದೆ; (ವಿವರ ನೀಡುವುದು)	ಮಡಿಕೇರಿ ನಗರದಲ್ಲಿ ಉತ್ಪತ್ತಿಯಾಗುವ ಮಲೀನ ನೀರನ್ನು ಒಳಚರಂಡಿ ಕೊಳವೆ ಮಾರ್ಗಗಳ ಮುಖಾಂತರ ಕೆ. ಬಾಡಗ ಗ್ರಾಮದ ಗಾಲ್ಫ್ ಮೈದಾನದ ಬಳಿ ಸರ್ವೆ ನಂ. 80/6- ಎ, 80/1 ರಲ್ಲಿ ಪ್ರಸ್ತಾಪಿಸಲಾಗಿರುವ 3.0 ಎಂ.ಎಲ್.ಡಿ ಸಾಮರ್ಥ್ಯದ ಎಸ್.ಬಿ.ಟಿ ತಾಂತ್ರಿಕತೆಯ ಮಲೀನ ನೀರು ಸಂಸ್ಕರಣಾಗಾರ ಘಟಕದಲ್ಲಿ ಶುದ್ಧೀಕರಿಸಿ ನಂತರ ಪಕ್ಕದಲ್ಲಿ ಹರಿಯುವ ನಾಲೆಗೆ ಹರಿಸಲು ಉದ್ದೇಶಿಸಲಾಗಿದೆ ಮತ್ತು ಮಡಿಕೇರಿಯ ಭೌಗೋಳಿಕತೆಯ ಹಿನ್ನಲೆಯಲ್ಲಿ 9 ಕಡೆಗಳಲ್ಲಿ ಸೆಪ್ಟಿಕ್ ಟ್ಯಾಂಕ್ ಗಳನ್ನು ನಿರ್ಮಿಸಿ ಮಲೀನ ನೀರನ್ನು ಶುದ್ಧೀಕರಿಸಿದ ನಂತರ ನಾಲೆಗೆ ಬಿಡಲಾಗುವುದು.
ಆ)	ಈ ಒಳಚರಂಡಿ ನೀರನ್ನು ಜಲಮೂಲಗಳಿಗೆ ಬಿಡುವ ಮೊದಲು ಶುದ್ಧೀಕರಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಯಾವ ಸ್ಥಳದಲ್ಲಿ ಮತ್ತು ಯಾವ ರೀತಿಯಲ್ಲಿ ಶುದ್ಧೀಕರಿಸಲಾಗುತ್ತಿದೆ? (ವಿವರ ನೀಡುವುದು)	ಮಡಿಕೇರಿ ನಗರದಲ್ಲಿ ಉತ್ಪತ್ತಿಯಾಗುವ ಮಲೀನ ನೀರನ್ನು ಒಳಚರಂಡಿ ಕೊಳವೆ ಮಾರ್ಗಗಳ ಮುಖಾಂತರ ಕೆ. ಬಾಡಗ ಗ್ರಾಮದ ಗಾಲ್ಫ್ ಮೈದಾನದ ಬಳಿ ಸರ್ವೆ ನಂ. 80/6- ಎ, 80/1 ರಲ್ಲಿ ಪ್ರಸ್ತಾಪಿಸಲಾಗಿರುವ 3.0 ಎಂ.ಎಲ್.ಡಿ ಸಾಮರ್ಥ್ಯದ ಎಸ್.ಬಿ.ಟಿ ತಾಂತ್ರಿಕತೆಯ ಮಲೀನ ನೀರು ಸಂಸ್ಕರಣಾಗಾರ ಘಟಕದಲ್ಲಿ ಶುದ್ಧೀಕರಿಸಲು ಉದ್ದೇಶಿಸಲಾಗಿದೆ. ಮಲೀನ ನೀರು ಶುದ್ಧೀಕರಣ ಘಟಕ ನಿರ್ಮಾಣದ ಕಾಮಗಾರಿಯು ಪೂರ್ಣಗೊಂಡ ನಂತರ ಮಲೀನ ನೀರನ್ನು ಮಾಲಿನ್ಯ ನಿಯಂತ್ರಣ ಮಂಡಳಿಯ ನಿಯಮಾವಳಿಯಂತೆ ಶುದ್ಧೀಕರಿಸಿ ಪಕ್ಕದಲ್ಲಿ ಹರಿಯುವ ಮುಖ್ಯ ನಾಲೆಗೆ ಹರಿಸಲಾಗುವುದು.

ಸಂಖ್ಯೆ: ನಅಇ 191 ಯುಎಂಎಸ್ 2020

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು